# All India Radio: Bangalore
# Regional Bulletin In Kannada
# 15.06.2025 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಪವನ ವಿದ್ಯುತ್ ಕ್ಷೇತ್ರದಲ್ಲಿ ಕರ್ನಾಟಕ ಪ್ರಥಮ ಸ್ಥಾನ; ರಾಜ್ಯಕ್ಕೆ ಪ್ರಶಸ್ತಿ
2. ಕಾಲ್ತುಳಿತ ಪ್ರಕರಣ; ತುರ್ತು ವಿಧಾನಮಂಡಲ ಅಧಿವೇಶನ ಕರೆಯಲು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹ
3. ಅಂತಾರಾಷ್ಟ್ರೀಯ ಯೋಗ ದಿನದ ಹಿನ್ನೆಲೆಯಲ್ಲಿ ವಿವಿಧ ಜಿಲ್ಲೆಗಳಲ್ಲಿ ಯೋಗ ತರಬೇತಿ
4. ರಾಜ್ಯದ ಕರಾವಳಿ, ಘಟ್ಟ ಪ್ರದೇಶಗಳಲ್ಲಿ ತೀವ್ರ ಮಳೆ; ಸಂಚಾರ ಅಸ್ತವ್ಯಸ್
5. ಭಾರೀ ಮಳೆ ಹಿನ್ನೆಲೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸಚಿವ ದಿನೇಶ್ ಗುಂಡೂರಾವ್ ಸೂಚನೆ

<><><><>

ರಾಜ್ಯವು ೨೦೨೪-೨೫ನೇ ಸಾಲಿನಲ್ಲಿ ಪವನ ವಿದ್ಯುತ್ ಕ್ಷೇತ್ರಕ್ಕೆ ೧ ಸಾವಿರದ ೩೩೧.೪೮ ಮೆಗಾ ವ್ಯಾಟ್ ಸೇರ್ಪಡೆಗೊಳಿಸುವ ಮೂಲಕ ದೇಶದಲ್ಲೇ ಪ್ರಥಮ ಸ್ಥಾನದಲ್ಲಿದ್ದು, ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದೆ. ಬೆಂಗಳೂರಿನಲ್ಲಿ ಇಂದು ಆಯೋಜಿಸಿದ್ದ 'ಗ್ಲೋಬಲ್ ವಿಂಡ್ ಡೇ ೨೦೨೫' 'ಪವನ್-ಉರ್ಜಾ: ಪವರಿಂಗ್ ದಿ ಫ್ಯೂಚರ್ ಆಫ್ ಇಂಡಿಯಾ" ಸಮಾರಂಭದಲ್ಲಿ ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರಿಂದ ಇಂಧನ ಸಚಿವ ಕೆ.ಜೆ.ಜಾರ್ಜ್ ಪ್ರಶಸ್ತಿ ಸ್ವೀಕರಿಸಿದರು. ಇದೇ ವೇಳೆ ೧ ಸಾವಿರದ ೧೩೬.೩ ಮೆಗಾ ವ್ಯಾಟ್ ಸಾಮರ್ಥ್ಯವನ್ನು ಸೇರ್ಪಡೆಗೊಳಿಸಿರುವ ತಮಿಳುನಾಡು ಎರಡನೇ ಸ್ಥಾನದಲ್ಲಿದೆ. ೯೫೪.೪ ಮೆಗಾ ವ್ಯಾಟ್ ಸೇರ್ಪಡೆಗೊಳಿಸಿರುವ ಗುಜರಾತ್ ಮೂರನೇ ಸ್ಥಾನದಲ್ಲಿದೆ. ಈ ವೇಳೆ ಮಾತನಾಡಿದ ಇಂಧನ ಸಚಿವ ಕೆ.ಜೆ.ಜಾರ್ಜ್, ೨೦೨೫ರ ಮೇ ವೇಳೆಗೆ ರಾಜ್ಯದ ಪವನ ವಿದ್ಯುತ್ತಿನ ಸ್ಥಾಪಿತ ಸಾಮರ್ಥ್ಯ ೭ ಸಾವಿರದ ೩೫೧ ಮೆಗಾವ್ಯಾಟ್‌ನಷ್ಟಿತ್ತು. ಕಳೆದ ಆರ್ಥಿಕ ಸಾಲಿನಲ್ಲಿ ೧ ಸಾವಿರದ ೩೩೧ ಮೆಗಾವ್ಯಾಟ್‌ಗಳನ್ನು ಸೇರ್ಪಡೆಗೊಳಿಸಿ, ದೇಶದಲ್ಲಿ ಅಗ್ರ ಸ್ಥಾನದಲ್ಲಿದ್ದೇವೆ,' ಎಂದು ತಿಳಿಸಿದರು. ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಮಾತನಾಡಿ, ಪವನ ವಿದ್ಯುತ್ ಸಾಮರ್ಥ್ಯದಲ್ಲಿ ಭಾರತ ಜಾಗತಿಕವಾಗಿ ೪ನೇ ಸ್ಥಾನದಲ್ಲಿದ್ದು, ೫೧.೫ ಗಿಗಾವ್ಯಾಟ್ ಸಾಮರ್ಥ್ಯವನ್ನು ಈಗಾಗಲೇ ಸ್ಥಾಪಿಸಲಾಗಿದೆ. ೨೦೩೦ರ ವೇಳೆಗೆ ಒಟ್ಟಾರೆ ವಿದ್ಯುತ್ ಉತ್ಪಾದನೆಯಲ್ಲಿ ನವೀಕರಿಸಬಹುದಾದ ಇಂಧನದ ಪಾಲನ್ನು ಶೇಕಡ ೫೦ಕ್ಕೆ ಏರಿಸುವ ಜತೆಗೆ ೨೦೭೦ರ ವೇಳೆಗೆ ಇಂಗಾಲದ ಹೊರಸೂಸುವಿಕೆ ನಿವ್ವಳ ಶೂನ್ಯದ ಗುರಿ ಸಾಧಿಸಬೇಕಿದೆ. ಈ ನಿಟ್ಟಿನಲ್ಲಿ ಪವನ ವಿದ್ಯುತ್ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಖಾತೆ ರಾಜ್ಯ ಸಚಿವ ಶ್ರೀಪಾದ್ ಯೆಸ್ಸೋ ನಾಯಕ್ ಮತ್ತಿತ್ತರರು ಉಪಸ್ಥಿತರಿದ್ದರು.

<><><><>

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಪ್ರಕರಣದ ಕುರಿತು ಚರ್ಚಿಸಲು ವಿಧಾನಮಂಡಲದ ತುರ್ತು ಅಧಿವೇಶನ ಕರೆಯುವಂತೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ. ಈ ಕುರಿತು ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಈ ದುರ್ಘಟನೆಯು ಸಾರ್ವಜನಿಕ ಸುರಕ್ಷತೆ, ಗುಂಪು ನಿಯಂತ್ರಣ, ಕ್ರೀಡೆ ಹಾಗೂ ಇತರೆ ಕಾರ್ಯಕ್ರಮಗಳ ಆಯೋಜನೆಗೆ ಸಂಬಂಧಿಸಿದಂತೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಈ ದುರಂತವು ಜನರಲ್ಲಿ ಆತಂಕ ಮತ್ತು ಕಳವಳ ಉಂಟುಮಾಡಿದೆ. ಘಟನೆಗೆ ಸಂಬಂಧಿಸಿದಂತೆ ಆಡಳಿತದಲ್ಲಿ ಆಗಿರುವ ಲೋಪಗಳು, ಘಟನೆ ನಂತರ ಸರ್ಕಾರದ ಕ್ರಮಗಳು ಅನೇಕ ಸಂಶಯಗಳನ್ನು ಹುಟ್ಟುಹಾಕಿದೆ. ಕಾಲ್ತುಳಿತಕ್ಕೆ ಕಾರಣರಾದ ಬಲಾಢ್ಯರನ್ನು

ರಕ್ಷಿಸಲಾಗುತ್ತಿದೆ. ಸತ್ಯವನ್ನು ಮರೆಮಾಚಲು ಮೂರು ರೀತಿಯ ತನಿಖೆಗಳನ್ನು ಮಾಡಲಾಗುತ್ತಿದೆ. ಅಸಹಾಯಕ ಅಧಿಕಾರಿಗಳನ್ನು ಬಲಿಪಶು ಮಾಡಲಾಗಿದೆ ಎಂಬ ಚರ್ಚೆಗಳು ಸಾರ್ವಜನಿಕ ವಲಯದಲ್ಲಿ ನಡೆಯುತ್ತಿವೆ ಎಂದು ಅವರು ದೂರಿದ್ದಾರೆ. ಕಾಲ್ತುಳಿತ ಪ್ರಕರಣದ ಕುರಿತು ಚರ್ಚಿಸಲು ವಿಧಾನಮಂಡಲದ ತುರ್ತು ಅಧಿವೇಶನ ಕರೆಯಬೇಕು ಎಂದು ಆರ್.ಅಶೋಕ ಆಗ್ರಹಿಸಿದ್ದಾರೆ.

<><><><>

ಇದೇ ೨೧ರಂದು ನಡೆಯಲಿರುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದ್ದು, ಯೋಗ ದಿನಾಚರಣೆಯ ದಿನದಂದು ಕೈಗೊಳ್ಳುವ ಶಿಷ್ಟಾಚಾರದ ಯೋಗಾಸನಗಳ ತಾಲೀಮು ನಡೆಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ವಿಶ್ವ ಯೋಗ ದಿನಾಚರಣೆ ಸಮಿತಿ ವತಿಯಿಂದ ನಡೆದ ಯೋಗ ಮತ್ತು ಪ್ರಾಣಾಯಾಮ ಶಿಬಿರದಲ್ಲಿ ಪುಷ್ಪಾಂಡಜ ಆಶ್ರಮದ ದಿವ್ಯಜ್ಞಾನಾನಂದ ಸ್ವಾಮೀಜಿ ಯೋಗಾಭ್ಯಾಸದ ತರಬೇತಿ ನೀಡಿದರು. ಈ ವೇಳೆ ಮಾತನಾಡಿದ ಅವರು, ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕಿದೆ. ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಯೋಗ ಉತ್ತಮ ಸಾಧನವಾಗಿದ್ದು, ಪ್ರತಿಯೊಬ್ಬರು ಯೋಗಾಭ್ಯಾಸ ಮಾಡುವುದನ್ನು ದಿನನಿತ್ಯದ ಚಟುವಟಿಕೆಗಳಲ್ಲಿ ಅಳವಡಿಸಿಕೊಳ್ಳಬೇಕಿದೆ ಎಂದು ಹೇಳಿದರು.

<><><><>

ಇದೇ ೨೧ ರಂದು ನಡೆಯಲಿರುವ ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ನಾಳೆ ಬೆಳಗ್ಗೆ ೭ ಗಂಟೆಗೆ ಚಿಕ್ಕಬಳ್ಳಾಪುರ ಜಿಲ್ಲಾ ಕಾರಾಗೃಹ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಆಯುಷ್ ಇಲಾಖೆ ಸಹಯೋಗದಲ್ಲಿ ಯೋಗಾಭ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಕಾರಾಗೃಹದ ವಿಚಾರಣಾಧೀನ ಕೈದಿಗಳು ಮತ್ತು ಕಾರಾಗೃಹ ಸಿಬ್ಬಂದಿ ಭಾಗವಹಿಸಲಿದ್ದಾರೆ. ನಗರ ಪೊಲೀಸ್ ಠಾಣೆ ಮುಂಭಾಗದಲ್ಲಿ ನಡೆಯಲಿರುವ ಯೋಗಾಭ್ಯಾಸ ಕಾರ್ಯಕ್ರಮದಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಲಿದ್ದಾರೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಸುಂದರರಾಜ್ ತಿಳಿಸಿದ್ದಾರೆ.

<><><><>

ಇತ್ತೀಚೆಗೆ ವಿಯೆಟ್ನಾಂನ ಹೋ ಚಿ ಮಿನ್ ನಗರದಲ್ಲಿ ನಡೆದ ಎರಡನೇ ಅಂತಾರಾಷ್ಟ್ರೀಯ ಯೋಗಾಸನ ಸ್ಪರ್ಧೆಯಲ್ಲಿ ವಿಜಯನಗರ ಜಿಲ್ಲೆಯ ಕೂಡ್ಲಿಗಿ ಪಟ್ಟಣದ ೮ನೇ ತರಗತಿ ಓದುತ್ತಿರುವ ಕೆ.ಎನ್.ಹಿಮಜ ಚಿನ್ನದ ಪದಕ ವಿಜೇತರಾಗಿದ್ದಾರೆ. ಈ ಸ್ಪರ್ಧೆಯಲ್ಲಿ ೧೯ ದೇಶಗಳ ೪೫೦ ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸಿದ್ದರು. ಸಾಂಪ್ರದಾಯಿಕ ಯೋಗಾಸನ ಜೂನಿಯರ್ ವಿಭಾಗದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ, ಚಿನ್ನದ ಪದಕ ವಿಜೇತ ಹಿಮಜ ಆಕಾಶವಾಣಿಯೊಂದಿಗೆ ತನ್ನ ಸಂತಸ ಹಂಚಿಕೊಂಡಿದ್ದಾರೆ.

<><><><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಳೆ ಸುರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಉತ್ತರಕನ್ನಡ ಜಿಲ್ಲೆಯ ಕುಮಟಾ ತಾಲೂಕಿನಾದ್ಯಂತ ನಿರಂತರವಾಗಿ ಮಳೆ ಸುರಿಯುತ್ತಿರುವ ಪರಿಣಾಮ ಕುಮಟಾ - ಶಿರಸಿ ಹೆದ್ದಾರಿಯ ದೇವಿ ಮನೆ ಘಟ್ಟದಲ್ಲಿ ತಡರಾತ್ರಿ ಭಾರಿ ಗುಡ್ಡ ಕುಸಿತ ಉಂಟಾಗಿದ್ದು, ಹೆದ್ದಾರಿಯಲ್ಲಿ ವಾಹನ ಸಂಚಾರ ಬಂದ್ ಮಾಡಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಕಳೆದ ಎರಡು ದಿನಗಳಿಂದ ಭಾರೀ ಮಳೆಯಾಗುತ್ತಿದೆ. ಸತತ ಮಳೆಯ ಪರಿಣಾಮ ನದಿಗಳು ತುಂಬಿ ಹರಿಯುತ್ತಿವೆ. ಜಿಲ್ಲೆಯಲ್ಲಿ ಇಂದು ಕೂಡ ಬೆಳಗ್ಗಿನಿಂದಲೇ ನಿರಂತರ ಮಳೆಯಾಗಿದ್ದು, ನಗರದ ಪಂಪ್ ವೆಲ್, ಕೊಟ್ಟಾರ, ಪಡೀಲ್ ಪ್ರದೇಶಗಳು ಜಲಾವೃತಗೊಂಡಿವೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಮಳೆಯಾಗುತ್ತಿದೆ. ಮಲೆನಾಡು ಭಾಗದಲ್ಲಿ ಗಾಳಿ ಸಹಿತ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಹೆಚ್ಚಿನ ಮಳೆಯಿಂದ ಶೃಂಗೇರಿ ತಾಲೂಕಿನ ನೆಮ್ಮಾರು ಬಳಿ ರಾಷ್ಟ್ರೀಯ ಹೆದ್ದಾರಿ ೧೬೯ ರಲ್ಲಿ ಭೂಕುಸಿತ ಉಂಟಾಗಿದೆ. ಅಪಾರ ಪ್ರಮಾಣದ ಕಲ್ಲು ಮಣ್ಣು ರಸ್ತೆಗೆ ಬಿದ್ದಿದ್ದು, ಸದಕ್ಕೆ ಶೃಂಗೇರಿ - ಮಂಗಳೂರು ರಸ್ತೆ ಸಂಪರ್ಕ ಕಡಿತಗೊಂಡಿದ್ದು, ವಾಹನ ಸವಾರರು ಬದಲಿ

ಮಾರ್ಗದಲ್ಲಿ ತೆರಳುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ. ಸ್ಥಳಕ್ಕೆ ಪೊಲೀಸ್ ಹಾಗೂ ಎನ್.ಡಿ.ಆರ್.ಎಫ್ ತಂಡ ಭೇಟಿ ನೀಡಿದ್ದು, ರಸ್ತೆ ತೆರವು ಕಾರ್ಯ ಪ್ರಗತಿಯಲ್ಲಿದೆ. ಚಾರ್ಮಾಡಿ ಘಾಟ್, ಕೊಟ್ಟಿಗೆಹಾರ ಸುತ್ತ-ಮುತ್ತ ಭಾರಿ ಮಳೆಯಾಗುತ್ತಿದೆ. ಚಾರ್ಮಾಡಿ ಘಾಟ್‌ನ ರಸ್ತೆ ಮೇಲೆ ಅಪಾರ ಪ್ರಮಾಣದ ನೀರು ಹರಿಯುತ್ತಿದೆ. ಈ ಭಾಗದಲ್ಲಿ ವಾಹನ ಸವಾರರು ಎಚ್ಚರಿಕೆಯಿಂದ ವಾಹನ ಚಲಾಯಿಸುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ. ಇನ್ನೊಂದೆಡೆ, ಮಳೆಯಿಂದ ಇಂದು ರಸ್ತೆ ಕಾಣದೆ ಮುಳ್ಳಯ್ಯನಗಿರಿಗೆ ತೆರಳುವ ಕವಿಕಲ್ ಗಂಡಿ ಬಳಿ ಪ್ರವಾಸಿಗರ ಕಾರೊಂದು ಪಲ್ಟಿಯಾಗಿದ್ದು, ಕಾರಿನಲ್ಲಿದ್ದ ಐವರು ಪ್ರವಾಸಿಗರಿಗೆ ಸಣ್ಣ-ಪುಟ್ಟ ಗಾಯಗಳಾಗಿವೆ.

<><><><>

ಕರಾವಳಿಯಲ್ಲಿ ಕಳೆದ ಎರಡು ದಿನಗಳಿಂದ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಗತ್ಯ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳುವಂತೆ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಜಿಲ್ಲಾಡಳಿತಕ್ಕೆ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿಗಳು ಹಾಗೂ ಪಾಲಿಕೆ ಆಯುಕ್ತರೊಂದಿಗೆ ದೂರವಾಣಿ ಕರೆ ಮಾಡಿ ಮಾತನಾಡಿದ ಸಚಿವರು, ಅಧಿಕಾರಿಗಳು ಸ್ಥಳದಲ್ಲಿದ್ದು, ಮಳೆ ಹಾನಿಯಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ಎಚ್ಚರಿಕೆ ವಹಿಸುವಂತೆ ನಿರ್ದೇಶನ ನೀಡಿದ್ದಾರೆ. ರಸ್ತೆ ಬದಿ ಗುಡ್ಡ ಕುಸಿತ ಸಂಭವಿಸಿದರೆ, ಆದಷ್ಟು ಶೀಘ್ರ ತೆರವು ಕಾರ್ಯಾಚರಣೆ ಕೈಗೊಳ್ಳಬೇಕು. ಅಪಾಯದ ಅಂಚಿನಲ್ಲಿರುವ ಮನೆಗಳ ಕುಟುಂಬಗಳನ್ನು ಸುರಕ್ಷಿತ ಸ್ಥಳಗಳಿಗೆ ಕೂಡಲೇ ಸ್ಥಳಾಂತರಿಸಲು ಕ್ರಮ ಕೈಗೊಳ್ಳಬೇಕು. ಪುನರ್ವಸತಿ ಕೇಂದ್ರಗಳನ್ನು ಸನ್ನದ್ಧ ಸ್ಥಿತಿಯಲ್ಲಿಡಬೇಕು ಎಂದು ಸೂಚನೆ ನೀಡಿದ್ದಾರೆ. ಪ್ರಾಕೃತಿಕ ವಿಕೋಪದಿಂದ ಯಾವುದೇ ಸಾವು-ನೋವು ಸಂಭವಿಸದಂತೆ ಎಚ್ಚರ ವಹಿಸಬೇಕು. ಕಂಟ್ರೋಲ್ ರೂಂ ನಿರಂತರ ಕಾರ್ಯಾಚರಣೆಯಲ್ಲಿದ್ದು, ಮಳೆ ಹಾನಿ ಕುರಿತ ಸಾರ್ವಜನಿಕರ ದೂರುಗಳಿಗೆ ತಕ್ಷಣ ಸ್ಪಂದಿಸಬೇಕು. ಪ್ರಾಕೃತಿಕ ವಿಕೋಪ ಕಾರ್ಯಾಚರಣೆಯಲ್ಲಿ ನಿರ್ಲಕ್ಷ್ಯ ತೋರಿದರೆ, ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಸಚಿವ ದಿನೇಶ್ ಗುಂಡೂರಾವ್ ಎಚ್ಚರಿಕೆ ನೀಡಿದ್ದಾರೆ.

<><><><>

ರಾಜ್ಯದ ಕರಾವಳಿಯಲ್ಲಿ ನೈರುತ್ಯ ಮುಂಗಾರು ಸಕ್ರಿಯವಾಗಿದ್ದು, ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ಕರಾವಳಿಯ ಹೆಚ್ಚಿನ ಸ್ಥಳಗಳಲ್ಲಿ, ದಕ್ಷಿಣ ಕರ್ನಾಟಕದ ಅನೇಕ ಸ್ಥಳಗಳಲ್ಲಿ ಹಾಗೂ ಉತ್ತರ ಕರ್ನಾಟಕದ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ ಎಂದು ಭಾರತೀಯ ಹವಮಾನ ಇಲಾಖೆ ತಿಳಿಸಿದೆ. ದಕ್ಷಿಣ ಕನ್ನಡ ಜಿಲ್ಲೆಯ ಪಣಂಬೂರಿನಲ್ಲಿ ಅತೀ ಹೆಚ್ಚು ೨೧ ಸೆಂಟಿ ಮೀಟರ್ ಮಳೆಯಾಗಿದೆ. ಇದೇ ವೇಳೆ ಮಂಗಳೂರು ೧೭, ಕೊಟ್ಟಿಗೆಹಾರ ೧೫, ಬಂಟ್ವಾಳ ಹಾಗೂ ಬೆಳ್ತಂಗಡಿಯಲ್ಲಿ ತಲಾ ೧೪ ಸೆಂಟಿ ಮೀಟರ್ ಮಳೆಯಾಗಿದೆ. ಮಂಗಳೂರು ವಿಮಾನ ನಿಲ್ದಾಣ, ಮೂಡಬಿದಿರೆ ಹಾಗೂ ಭಾಗಮಂಡಲದಲ್ಲಿ ತಲಾ ೧೩ ಸೆಂಟಿ ಮೀಟರ್ ಮಳೆಯಾಗಿದೆ. ಉಪ್ಪಿನಂಗಡಿ, ಮಾಣಿ, ಕ್ಯಾಸಲ್‌ರಾಕ್ ಮತ್ತು ಮಂಕಿಯಲ್ಲಿ ತಲಾ ೧೧ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ೩ ದಿನಗಳ ಕಾಲ ರಾಜ್ಯದ ಕರಾವಳಿ, ಘಟ್ಟ ಪ್ರದೇಶ ಮತ್ತು ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತ-ಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ. ಗಾಳಿಯೊಂದಿಗೆ ಸಾಧಾರಣ ಮಳೆ ಸಾಧ್ಯತೆ. ಗರಿಷ್ಠ ತಾಪಮಾನ ೨೭ ಹಾಗೂ ಕನಿಷ್ಠ ತಾಪಮಾನ ೨೦ ಡಿಗ್ರಿ ಸೆಲ್ಸಿಯಸ್ ಸಂಭವ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>